490 (787) ಶ್ರೀ ಜಯಪ್ರಕಾಶ್ ಹೆಗ್ಡೆ. ಕೆ (ಬ್ರಹ್ಮಾವರ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಎಷ್ಟು ಪ್ರೌಢಶಾಲೆಗಳನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದೆ:

ಆ) ಹಾಗಿದ್ದಲ್ಲಿ, ಬ್ರಹ್ಮಾವರದಲ್ಲಿ ಎಲ್ಲೆಲ್ಲಿ ಪ್ರಾರಂಭಿಸಲು ಉದ್ದೇಶಿಸಲಾಗಿದೆ?

ಶ್ರೀ ಬಿ.ಎಸ್. ಹೊರಟ್ಟಿ(ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು):

ಅ) 2006–07ನೇ ಸಾಲಿನಿಂದ ರಾಜ್ಯದಲ್ಲಿ ಒಟ್ಟು 365 ಹೊಸ ಸರ್ಕಾರಿ ಪ್ರೌಢಶಾಲೆಗಳನ್ನು ಪ್ರಾರಂಭಿಸಲು ಸರ್ಕಾರ ಉದ್ದೇಶಿಸಿದೆ.

ಆ) ಬ್ರಹ್ಮಾವರದ ಸಂತೇಕಟ್ಟೆ ಗ್ರಾಮಕ್ಕೆ ಹೊಸ ಸರ್ಕಾರಿ ಪ್ರೌಢಶಾಲೆ ಮಂಜೂರಾತಿ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆ.

491 (788) ಶ್ರೀ ಜಯಪ್ರಕಾಶ್ ಹೆಗ್ಡೆ. ಕೆ (ಬ್ರಹ್ಮಾವರ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಎಷ್ಟು ನೂತನ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದೆ;

ಆ) ಹಾಗಿದ್ದಲ್ಲಿ, ಬ್ರಹ್ಮಾವರದಲ್ಲಿ ಎಲ್ಲೆಲ್ಲಿ ಪ್ರಾರಂಭಿಸಲು ಉದ್ದೇಶಿಸಲಾಗಿದೆ?

ಶ್ರೀ ಬಿ.ಎಸ್. ಹೊರಟ್ಟಿ(ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು):

ಅ) 2006–07ನೇ ಸಾಲಿಗೆ ಖಾಸಗಿ ಅನುದಾನ ರಹಿತವಾಗಿ 255 ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಮಂಜೂರಾತಿ ನೀಡಲಾಗಿದೆ. ಹಾಗೂ ರಾಜ್ಯದ 130 ಸ್ಥಳಗಳಲ್ಲಿ ಹೊಸ ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸುವ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ.

ಆ) ಬ್ರಹ್ಮಾವರದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜನ್ನು ಪ್ರಾರಂಭಿಸುವ ಬಗ್ಗೆ ಪರಿಶೀಲಿಸಲಾಗುತ್ತಿದೆ.

492 (527) ಶ್ರೀ ಕುಮಾರ್ ಬಂಗಾರಪ್ಪ. ಎಸ್ (ಸೊರಬ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗೆ ದಯವಿಟ್ಟು ಉತ್ತರಿಸುವರೇ?

ಅ) ಸೊರಬ ತಾಲ್ಲೂಕಿನ ಅನವಟ್ಟಿಯಲ್ಲಿ ಅಪೂರ್ಣಗೊಂಡ ಟಿಸಿಹೆಚ್ ಕಾಲೇಜು ಕಟ್ಟಡದ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು?

ಶ್ರೀ ಬಿ.ಎಸ್. ಹೊರಟ್ಟಿ(ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು):

ಅ) ಅಂದಾಜು ರೂ. 30.00 ಲಕ್ಷಗಳ ಮೌಲ್ಯದ ಈ ಕಾಮಗಾರಿಗೆ ಈವರೆಗೆ ರೂ. 15.00 ಲಕ್ಷಗಳನ್ನು ಬಿಡುಗಡೆಗೊಳಿಸಿದೆ. ಕಾಮಗಾರಿಯ ಭೌತಿಕ ಪ್ರಗತಿಗನುಸಾರವಾಗಿ ಆಯವ್ಯಯವನ್ನು ಹಂತ ಹಂತವಾಗಿ ಬಿಡುಗಡೆ ಗೊಳಿಸಲಾಗುತ್ತಿದೆ ಮತ್ತು ಅತೀ ಶೀಘ್ರದಲ್ಲಿಯೇ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು.